# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 17-07-2021. ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ).
4. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ. ಸಭೆಯಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ-01ರ ಮಾರುತಿನಗರ 24ನೇ ಅಡ್ಡರಸ್ತೆ, ಮತ್ತು ಯಲಹಂಕ ಒಲ್ಡ್ ಟೌನ್ ಬಾಂಗ್ಲಾ ಶಾಲೆಯ ಹತ್ತಿರ ಡೌನ್ ಬಜಾರ್ ಹತ್ತಿರ, ಸುರಬಿ ಬಡಾವಣೆ, ಇತ್ಯಾದಿ ಜಾಗಗಳಲ್ಲಿ ಮಳೆನೀರಿನಿಂದ ತುಂಬಿರುವ ಚರಂಡಿಗಳಲ್ಲಿ ಹೂಳನ್ನು ತೆಗೆದು ಸ್ವಚ್ಛಗೊಳಿಸಿರುವುದಾಗಿ ಹಾಗೂ ಮಳೆಗಾಲದಲ್ಲಿ ಉಪವಿಭಾಗದಲ್ಲಿ ತಾತ್ಕಾಲಿಕ ನಿಯಂತ್ರಣ ಕೊಠಡಿ ತೆರೆದಿರುವುದಾಗಿ ವಾರ್ಡ್ ನಂ - 01ರ ಸಹಾಯಕ ಅಭಿಯಂತರರು ಸಭೆಗೆ ತಿಳಿಸಿದರು.

2. ಮಾರುತಿನಗರದ 1ನೇ ಮುಖ್ಯರಸ್ತೆಯ ಮತ್ತು ಅಡ್ಡರಸ್ತೆಯ ಜಂಕ್ಷನ್‌ಗಳಲ್ಲಿ ಹಾಲಿ ಒಡೆದು ಹೋಗಿರುವ ಕವರಿಂಗ್ ಸ್ಲ್ಯಾಬ್‌ಗಳನ್ನು ಸರಿಪಡಿಸುವುದು ಹಾಗೂ ರಸ್ತೆ ಬದಿಯಲ್ಲಿರುವ ಮರಗಳು ಅಡ್ಡಲಾಗಿ ಬಂದಿರುವ ರೆಂಬೆಕೊಂಬೆಗಳಲ್ಲಿ ಟ್ರಿಮ್ಮಿಂಗ್ ಮಾಡುವಂತೆ ಸಭೆಯಲ್ಲಿ ಸರ್ವಾನುಮತಗಳಿಂದ ತಿರ್ಮಾನಿಸಲಾಯಿತು.

3. ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ತರಕಾರಿ ಅಂಗಡಿಗಳನ್ನು ಹಾಗೂ ತಳ್ಳುವ ಗಾಡಿಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕೆಂದು ಸಹಾಯಕ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

4. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಕೊವಿಡ್ – 19 ರ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲು ಹಾಗೂ ವ್ಯಾಕ್ಸಿನ್ ಹಾಕಿಸಿಕೊಳ್ಳುವುದರ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೋಡೆಲ್

ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.